# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 951(1302)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : 2015ರ ನಂತರದಲ್ಲಿ ಖಾಲಿಯಾಗಿರುವ ಅನುದಾನಿತ ಹುದ್ದೆಗಳ ಭರ್ತಿ ಬಗ್ಗೆ

(ಅ) ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ಇತ್ಯಾದಿ ಕಾರಣಗಳಿಂದಾಗಿ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ; ಇಲ್ಲಿಯವರೆಗೂ ಭರ್ತಿ ಮಾಡಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಇಲ್ಲಿಯವರೆಗೂ ಭರ್ತಿ ಮಾಡಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಬಾಕಿ ಉಳಿದಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಸಂಸ್ಥೆವಾರು, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಚಿಕ್ಕೋಡಿ ಜಿಲ್ಲೆಗಳ ಮಾಹಿತಿ ನೀಡುವುದು)

(ಇ) ಪ್ರಸ್ತುತ 2015ರ ನಂತರದಲ್ಲಿ ನಿವೃತ್ತಿ, ಮರಣ, ಇತ್ಯಾದಿ ಕಾರಣಗಳಿಂದಾಗಿ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮವಹಿಸುವುದೇ; ಸದರಿ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಇದ್ದಲ್ಲಿ, ಯಾವ ವರ್ಷದವರೆಗೆ ವಿಸ್ತರಿಸಲು ಸರ್ಕಾರ ಚಿಂತನೆ ನಡೆಸಿದೆ? (ವಿವರವನ್ನು ಒದಗಿಸುವುದು)